# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 305 (278) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 18.07.2024 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2006ರ ನಂತರದಲ್ಲಿ ನೇಮಕಗೊಂಡ ರಾಜ್ಯ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ. |
| ಆ | ಇದ್ದಲ್ಲಿ, ಸರ್ಕಾರ ಇದುವರೆವಿಗೂ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸದಿರಲು ಕಾರಣಗಳೇನು; | |
| ಇ | ಸರ್ಕಾರಿ ನೌಕರರಿಗೆ " ಹಳೆಯ ಪಿಂಚಣಿ ಯೋಜನೆ" ಯನ್ನು ದೇಶದ ಬಹುತೇಕ ರಾಜ್ಯಗಳು ಮರುಸ್ಥಾಪಿಸಿದ್ದು, ಕರ್ನಾಟಕ ರಾಜ್ಯ ಕೂಡ ರಾಜ್ಯ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸಲು ಈ ಕೂಡಲೇ ಕ್ರಮ ವಹಿಸುವುದೇ; | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ. |
| ಈ | ಯಾವ ಕಾಲಮಿತಿಯೊಳಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಸರ್ಕಾರಿ ಜಾರಿಗೊಳಿಸುವುದು? | |

ಸಂಖ್ಯೆ: ಆಇ-ಪಿಇಎನ್/200/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ